# ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು

## ಸಿಸಿ ನಂ.160/2024

**ಫಿರ್ಯಾದುದಾರರುಃ** ಮಲ್ಲಪ್ಪ, ಬಿನ್ ಬಸಪ್ಪ,
ವಯಸ್ಸು ಸುಮಾರು 46 ವರ್ಷ,
ಕೆ.ಎಸ್.ಆರ್.ಟಿ.ಸಿ. ನಿರ್ವಾಹಕ, ಹುಣಸೂರು ಡಿಪೋ,
ವಾಸಃ ಹುಣಸೂರು ಟೌನ್.

**– ವಿರುದ್ಧ –**

**ಆರೋಪಿಃ** ಹೆಚ್.ವಿ.ವಿಜಯ, ಬಿನ್ ಲೇಟ್ ವೇದರಾಜು, ವಯಸ್ಸು ಸುಮಾರು 42 ವರ್ಷ, ಖಾಸಗಿ ಪಶುವೈದ್ಯಕೀಯ ನಿರೀಕ್ಷಕರು, ವಾಸಃ ರಾಮ ಲೇಔಟ್, ಚಿಕ್ಕ ಹುಣಸೂರು, ಹುಣಸೂರು ಟೌನ್.

## ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಮಲ್ಲಪ್ಪ ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿಯಿತು |
| ಪ್ರಶ್ನೆ 2: | ಪಿ.ಡಬ್ಲ್ಯೂ1 ಮಲ್ಲಪ್ಪ ರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಪರಿಚಯಸ್ಥರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |

| | |
|---|---|
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಈಗ್ಗೆ 3 ವರ್ಷಗಳ ಹಿಂದೆ ಸಾಲವನ್ನು ತೆಗೆದುಕೊಂಡು ರಾಮ ಲೇಔಟ್ ನಲ್ಲಿ ವಸತಿಗೃಹವನ್ನು ನಿರ್ಮಾಣ ಮಾಡಿದ್ದು, ಸದರಿ ಮನೆ ನಿರ್ಮಾಣಕ್ಕಾಗಿ ಮಾಡಿದ ಸಾಲವನ್ನು ತೀರಿಸಲು ಫಿರ್ಯಾದುದಾರರಿಂದ ದಿನಾಂಕಃ 15.06.2022ರಂದು ರೂ.3,50,000/-ಗಳ ಕೈ ಸಾಲವನ್ನು 1% ಬಡ್ಡಿಯೊಂದಿಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ:4 | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲವನ್ನು ಪಡೆದುಕೊಳ್ಳುವ ಸಮಯದಲ್ಲಿ ನೀವು 30.01.2024 ಎಂದು ದಿನಾಂಕ ನಮೂದಿಸಿದ ಕೆನರಾ ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ನಂ.877529 ಅನ್ನು ರೂ.3,50,000/- ಗಳಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಎಸ್.ಜೆ.ರಸ್ತೆ, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕೆ ಸದರಿ ಚೆಕ್ ದಿನಾಂಕಃ 01.02.2024 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 22.02.2024 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸನ್ನು ನೀಡಿದ್ದು, ಸದರಿ ನೋಟೀಸು ನಿಮಗೆ ದಿನಾಂಕಃ 23.02.2024ರಂದು ಜಾರಿಯಾಗಿದ್ದರೂ ಸಹ ನೀವು ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಉದ್ದೇಶಪೂರ್ವಕವಾಗಿ ಮರುಪಾವತಿಸಿಲ್ಲ ಹಾಗು ನೋಟೀಸಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೆಬಲ್ ಇನ್ಸ್ಟುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಸ್ವೀಕೃತಿ ಮತ್ತು ದೂರನ್ನು ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇದೆ |

| | |
|---|---|
| ಪ್ರಶ್ನೆ 10: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇದೆ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 16.07.2025.

(ಅನಿತ)

**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ